**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ/835/ಗ್ರಾಪಂಕಾ/2016

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 06-12-2016.

## ಸುತ್ತೋಲೆ

**ವಿಷಯ:** ಗ್ರಾಮ ಪಂಚಾಯತಿಗಳಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಹಾಜರಾತಿ ಮತ್ತು ಉಪಸ್ಥಿತಿಯನ್ನು ಕಡ್ಡಾಯಗೊಳಿಸುವ ಬಗ್ಗೆ.

**ಉಲ್ಲೇಖ:** 1. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ/419/ಗ್ರಾಪಂಕಾ/2011 ದಿನಾಂಕ: 06.01.2012.
2. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ/650/ಗ್ರಾಪಂಕಾ/2014 ದಿನಾಂಕ 19.09.2014.

*****

ಅಧಿಕಾರ ವಿಕೇಂದ್ರೀಕರಣ ತತ್ವದನ್ವಯ ಗ್ರಾಮ ಪಂಚಾಯತಿಗಳು ಜನಸಾಮಾನ್ಯರಿಗೆ ಹಲವಾರು ಸೇವೆಗಳನ್ನು ಒದಗಿಸಬೇಕಾಗಿರುತ್ತದೆ. ವಿವಿಧ ಇಲಾಖೆಯ ಅಭಿವೃದ್ಧಿ ಕಾರ್ಯಕ್ರಮಗಳ ಅನುಷ್ಠಾನ ಮತ್ತು ಉಸ್ತುವಾರಿಯ ಜವಾಬ್ದಾರಿಯನ್ನು ಗ್ರಾಮ ಪಂಚಾಯತಿಗಳಿಗೆ ವಹಿಸಲಾಗಿರುತ್ತದೆ. ಭಾರತ ಸರ್ಕಾರದ ಪ್ರಮುಖ ಯೋಜನೆಗಳಾದಂತಹ ನರೇಗಾ, ಸ್ವಚ್ಛ ಭಾರತ ಅಭಿಯಾನ, ಕುಡಿಯುವ ನೀರು ಮುಂತಾದ ಯೋಜನೆಗಳನ್ನು ಅನುಷ್ಠಾನಗೊಳಿಸುವುದರ ಜೊತೆಗೆ ಪಂಚಾಯತ್ ರಾಜ್ ಸಂಸ್ಥೆಗೆ ಸಂಬಂಧಪಟ್ಟ ಇ-ಸ್ವತ್ತು, ಪರವಾನಗಿ ನೀಡುವುದು, ವಸತಿ ಯೋಜನೆ ಇತ್ಯಾದಿ ಯೋಜನೆಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಸಾರ್ವಜನಿಕರು ಗ್ರಾಮ ಪಂಚಯತಿಗಳಿಗೆ ಭೇಟಿ ನೀಡಬೇಕಾದ ಅನಿವಾರ್ಯತೆ ಇರುತ್ತದೆ. ಇಂತಹ ಸಮಯದಲ್ಲಿ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹಾಗೂ ಕಾರ್ಯದರ್ಶಿಗಳು ಲಭ್ಯತೆ ಇಲ್ಲದ ಕಾರಣ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿದ್ದು, ಈ ಬಗ್ಗೆ ಸಾರ್ವಜನಿಕವಾಗಿ ಆಕ್ಷೇಪಗಳು ಬರುತ್ತಿವೆ. ಈಗಾಗಲೇ ಈ ಸಂಬಂಧ ಉಲ್ಲೇಖದಲ್ಲಿ ನಮೂದಿಸಿರುವ ಸುತ್ತೋಲೆಗಳನ್ನು ಹೊರಡಿಸಲಾಗಿದೆ. ಇತ್ತೀಚೆಗೆ ವಿಧಾನ ಮಂಡಲದ ಉಭಯ ಸದನಗಳಲ್ಲಿ ಈ ಸಮಸ್ಯೆಯನ್ನು ಗಂಭೀರವಾಗಿ ಚರ್ಚಿಸಲಾಗಿದ್ದು, ಗ್ರಾಮ ಪಂಚಾಯತಿಯ ಅಧಿಕಾರಿ ಮತ್ತು ಸಿಬ್ಬಂದಿ ವರ್ಗದವರು ಗ್ರಾಮ ಪಂಚಾಯತಿಗಳ ಕಾರ್ಯಾಲಯಗಳಲ್ಲಿ ಸಾರ್ವಜನಿಕರ ಸೇವೆಗೆ ಲಭ್ಯವಾಗುವಂತೆ ಮಾಡಲು ಸರ್ಕಾರ ತ್ವರಿತವಾಗಿ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿರುತ್ತಾರೆ.

ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ಕಾರ್ಯದರ್ಶಿಗಳು ಆಗಿಂದಾಗ್ಗೆ ತಾಲ್ಲೂಕು ಪಂಚಾಯತಿಗಳಲ್ಲಿ ನಡೆಯುವ ಸಭೆಗಳಿಗೆ ಹಾಗೂ ಕಛೇರಿ ಕಾರ್ಯಗಳ ಸಂಬಂಧ ಆಗಿಂದಾಗ್ಗೆ ತಾಲ್ಲೂಕು/ಜಿಲ್ಲಾ ಕೇಂದ್ರಕ್ಕೆ ಹೋಗುತ್ತಿರುವುದನ್ನು ಸರ್ಕಾರ ಗಮನಿಸಿರುತ್ತದೆ. ಇದರಿಂದಾಗಿ ಇವರುಗಳ ಸೇವೆಯು ಗ್ರಾಮ ಪಂಚಾಯತಿಗಳಲ್ಲಿ ಲಭ್ಯವಾಗದೇ ಸಾರ್ವಕರಿಗೆ ತೊಂದರೆ ಉಂಟಾಗುತ್ತಿರುವುದನ್ನು ಸಹ ಗಮನಿಸಲಾಗಿದೆ. ಆದುದರಿಂದ ತಾಲ್ಲುಕು ಪಂಚಾಯತಿ ಹಾಗೂ ಜಿಲ್ಲಾ ಪಂಚಾಯತಿಯ ಹಿರಿಯ ಅಧಿಕಾರಿಗಳು ಪದೇ ಪದೇ ತಾಲ್ಲೂಕು ಹಾಗೂ ಜಿಲ್ಲಾ ಕೇಂದ್ರಗಳಲ್ಲಿ ಸಭೆಗಳನ್ನು ಆಯೋಜಿಸಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ಕಾರ್ಯದರ್ಶಿಗಳನ್ನು ಹಾಜರಾಗುವಂತೆ ಸೂಚಿಸುತ್ತಿರುವುದನ್ನು ಈ ಮೂಲಕ ನಿರ್ಬಂಧಿಸಲಾಗಿದೆ. ಅನಿವಾರ್ಯ ಪ್ರಸಂಗಗಳಲ್ಲಿ ಅವಶ್ಯವಿದ್ದಲ್ಲಿ ಮಾತ್ರ ವಾರದಲ್ಲಿ ಒಂದು ಸಾರಿ ಅಂದರೆ ಸೋಮವಾರ ಮತ್ತು ಶುಕ್ರವಾರಗಳನ್ನು ಹೊರತುಪಡಿಸಿ ತಾಲ್ಲೂಕು ಅಥವಾ ಜಿಲ್ಲಾ ಕೇಂದ್ರಗಳಲ್ಲಿ ಆಡಳಿತಾತ್ಮಕ ಕಾರಣಗಳಿಗಾಗಿ ಮಾತ್ರ ಸಭೆಯನ್ನು ನಡೆಸುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.

**ವಾರದ ಸೋಮವಾರ ಮತ್ತು ಶುಕ್ರವಾರ ಗ್ರಾಮ ಪಂಚಾಯತಿಗಳಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿಗಳು ಹಾಗೂ ಎಲ್ಲಾ ಸಿಬ್ಬಂದಿಗಳು ಕಛೇರಿ ಅವಧಿಯಲ್ಲಿ ಪೂರ್ಣವಾಗಿ ಗ್ರಾಮ ಪಂಚಾಯತಿಯಲ್ಲಿ ಕಾರ್ಯನಿರತರಾಗಿರಬೇಕು ಹಾಗೂ ಸಾರ್ವಜನಿಕರಿಗೆ ಲಭ್ಯವಾಗುವಂತೆ ಈ ಮೂಲಕ ಸೂಚಿಸಲಾಗಿದೆ. ಮುಂದುವರೆದು ಸದರಿ ದಿನಗಳಂದು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ಕಾರ್ಯದರ್ಶಿಗಳ ಅನಿವಾರ್ಯ ಮತ್ತು ತುರ್ತು ಸಂಧರ್ಭಗಳಲ್ಲಿ ಸಭೆ ಮುಂತಾದವುಗಳನ್ನು ಆಯೋಜಿಸಬೇಕಾದರೆ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಅನುಮತಿಯನ್ನು ಪಡೆಯಬೇಕಾಗಿ ತಿಳಿಸಲಾಗಿದೆ.**

ಈ ನಿರ್ದೇಶನಗಳನ್ನು ಉಲ್ಲಂಘಿಸಿದರೆ ಅಥವಾ ಈ ದಿನಗಳಲ್ಲಿ ಗ್ರಾಮ ಪಂಚಾಯತಿಯಲ್ಲಿ ಅಧಿಕಾರಿಗಳು ಸಾರ್ವಜನಿಕರಿಗೆ ಲಭ್ಯವಾಗದಿದ್ದರೆ ಶಿಸ್ತು ಕ್ರಮ ಕೈಗೊಳ್ಳಲಾಗುವುದೆಂದು ಎಚ್ಚರಿಸಲಾಗಿದೆ.

(ಟಿ.ವಿ.ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1. ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿಗಳು.
2. ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿಗಳು,
3. ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

ಪ್ರತಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಯವರಿಗೆ.
3. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ, ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆ.
4. ಗಣಕ ಕೋಶ, ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆ.
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.